# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೆರಡನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ: 15ನೇ ಡಿಸೆಂಬರ್, 2020**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01.ಸಂತಾಪ ಸೂಚನೆಗಳು

### 02. ಶಾಸನ ರಚನೆ

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ವಿಧೇಯಕ, 2020**
**ಶ್ರೀ ಪ್ರಭು ಬಿ ಚೌಹಾನ್ ( ಪಶು ಸಂಗೋಪನೆ, ಹಜ್ ಮತ್ತು ವಕ್ಫ್ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

### 03. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

| | |
|---|---|
| **ಶ್ರೀಯುತರುಗಳಾದ:**<br>**ಎಸ್.ಆರ್.ಪಾಟೀಲ್, ಮಾನ್ಯ ವಿ.ಪ.ನಾ**<br>**ಎಂ.ನಾರಾಯಣಸ್ವಾಮಿ, ಮಾನ್ಯ ವಿ.ಪ.ಮು.ಸ**<br>**ಅಲ್ಲಂ ವೀರಭದ್ರಪ್ಪ,**<br>**ಆರ್.ಬಿ.ತಿಮ್ಮಾಪುರ**<br>**ಹಾಗೂ ಇತರರುಗಳು** | ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಅತಿವೃಷ್ಟಿಯಿಂದಾಗಿ ಸಾರ್ವಜನಿಕ ಆಸ್ತಿಪಾಸ್ತಿಗಳು ಹಾಗೂ ಪ್ರಾಣ ಹಾನಿಯಾಗಿದ್ದು ಸರ್ಕಾರವು ಪರಿಹಾರ ಕಾರ್ಯಗಳನ್ನು ಕೈಗೊಳ್ಳದಿರುವ ಬಗ್ಗೆ. |

### 04. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಮರಿತಿಬ್ಬೇಗೌಡ** ಅವರು ಕೋವಿಡ್-19 ಹಿನ್ನೆಲೆಯಲ್ಲಿ ಆರ್ಥಿಕ ಮುಗ್ಗಟ್ಟಿನಿಂದಾಗಿ ಅನುದಾನ ರಹಿತ ಶಾಲಾ ಕಾಲೇಜುಗಳು, ಪಾಲಿಟೆಕ್ನಿಕ್ ಮತ್ತು ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ವೇತನ ಪಾವತಿಸದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02. **ಶ್ರೀಮತಿ ಎಸ್. ವೀಣಾ ಅಚ್ಚಯ್ಯ** ಅವರು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು, ಇಲ್ಲಿನ ನಿರ್ದೇಶಕರನ್ನು ಪ್ರತಿನಿಯೋಜನೆ ನಿಯಮಾವಳಿಗೆ ವಿರುದ್ಧವಾಗಿ ಕಳೆದ 9 ವರ್ಷಗಳಿಂದ ಮುಂದುವರೆಸಿಕೊಂಡು ಬಂದಿರುವುದರಿಂದ ಸಂಸ್ಥೆಯ ಗುಣಮಟ್ಟ ಕುಂಠಿತವಾಗಿರುವ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

01. **ಶ್ರೀ ಕೆ.ಟಿ. ಶ್ರೀಕಂಠೇಗೌಡ ಮತ್ತು ಶ್ರೀ ಮರಿತಿಬ್ಬೇಗೌಡ** ಅವರುಗಳು ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆ, ಪದವಿಪೂರ್ವ ಮತ್ತು ಪದವಿ ಕಾಲೇಜುಗಳಲ್ಲಿ ನಿವೃತ್ತಿ/ ರಾಜೀನಾಮೆ/ಇನ್ನಿತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳ ಭರ್ತಿ ಹಾಗೂ 1986ರಿಂದ 1995ನೇ ಸಾಲಿನವರೆಗೆ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ಪ್ರಸ್ತಾವನೆಗಳಿಗೆ ಆರ್ಥಿಕ ಇಲಾಖೆಯು ಕೋವಿಡ್-19ರ ಹಿನ್ನೆಲೆಯಲ್ಲಿ ಅನುಮೋದನೆ ನೀಡಲು ಸಾಧ್ಯವಿಲ್ಲವೆಂದು ಆದೇಶಿಸಿರುವ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಮಾನ್ಯ ಸರ್ಕಾರಿ ಮುಖ್ಯ ಸಚೇತಕರು)** ಅವರು ಬೆಳಗಾವಿ ಜಿಲ್ಲೆಯ ಪಶ್ಚಿಮ ಘಟ್ಟ ಪ್ರದೇಶದಲ್ಲಿ ವಾಸಿಸುತ್ತಿರುವ ಜನರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು.

## 07. ಅರ್ಧ ಗಂಟೆ ಕಾಲಾವಧಿ ಚರ್ಚೆ

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಹೊಸ ಶಿಕ್ಷಣ ನೀತಿ ಬಗ್ಗೆ ದಿನಾಂಕ:07.12.2020ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:07 (60+62)**ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಬಿ. ಕೆ. ಹರಿಪ್ರಸಾದ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**